# 6ನೇ ವೇತನ ಆಯೋಗ ಜಾರಿ ಅಸಾಧ್ಯ

## ಹಠ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲು ಸಿದ್ಧ: ಮುಖ್ಯಮಂತ್ರಿ ಯಡಿಯೂರಪ್ಪ ಎಚ್ಚರಿಕೆ

ಬೆಳಗಾವಿ: ಸಾರಿಗೆ ನೌಕರರಿಗೆ ಆರನೇ ವೇತನ ಆಯೋಗ ಜಾರಿಗೆ ಮಾಡಲು ಸಾಧ್ಯವೇ ಇಲ್ಲ, ಶೇ.8ರಷ್ಟು ವೇತನ ಹೆಚ್ಚಳ ಮಾಡಲು ಸರ್ಕಾರ ಬದ್ಧ, ಹಠ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲು



ಸಿದ್ಧ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಎಚ್ಚರಿಕೆ ನೀಡಿದ್ದಾರೆ.

ತಾಲೂಕಿನ ಮುತ್ನಾಳ ಗ್ರಾಮದಲ್ಲಿ ಪಂಗಳವಾರ ಕೇದಾರಮಠಕ್ಕೆ ಭೇಟಿ ನೀಡಿ ಸುದ್ದಿಗಾರರ ಜತೆ ಮಾತನಾಡಿ, ಈಗ ರಾಜ್ಯದಲ್ಲಿ ಕೊರೊನಾ ಸಂಕಷ್ಟದಿಂದ ಆರ್ಥಿಕ ಸ್ಥಿತಿ ಸಮಾಧಾನಕರವಾಗಿಲ್ಲ. ಆದರೂ ಸಹ ಸಾರಿಗೆ ನೌಕರರ ವೇತನದ 1200 ಕೋಟಿ ರೂ ಹಣವನ್ನು ಸರ್ಕಾರವೇ ನೀಡಿದೆ. ಈಗ ಶೇ.8ರಷ್ಟು ವೇತನ ಹೆಚ್ಚಳ ಮಾಡಲು ಉದ್ದೇಶಿಸಿದ್ದು ಅದನ್ನು ನೀಡಲು ಬದ್ಧ. ಹೀಗಾಗಿ ನಮ್ಮ ಮಾತಿಗೆ ಬೆಲೆ ಕೊಟ್ಟು ಮುಷ್ಕರ ಕೈ ಬಿಡುವರೇ ಎಂಬುದನ್ನು ಕಾದು ನೋಡುತ್ತೇವೆ. ದುರುದ್ದೇಶಪೂರ್ವಕವಾಗಿ ಮುಷ್ಕರ ನಡೆಸುವುದು ಸರಿಯಲ್ಲ ಎಂದರು.

ಸಾರಿಗೆ ನೌಕರರ ಒಂಬತ್ತು ಬೇಡಿಕೆಗಳ ಪೈಕಿ ಈಗಾಗಲೇ ಎಂಟು ಬೇಡಿಕೆಗಳನ್ನು ಈಡೇರಿಸಲಾಗಿದೆ. ಇಷ್ಟಾದ ಮೇಲೂ ಹಠ ಮಾಡುವುದು ಸರಿಯಲ್ಲ, ಸಾರ್ವಜನಿಕರಿಗೆ ಆಗುವ ತೊಂದರೆ ಗಮನದಲ್ಲಿಟ್ಟುಕೊಂಡು ಮುಷ್ಕರ ಕೈಬಿಡಬೇಕು. ಜನರಿಗೆ ತೊಂದರೆಯಾಗದಂತೆ ಪರ್ಯಾಯ ಸಾರಿಗೆ ವ್ಯವಸ್ಥೆ ಮಾಡಲಾಗುತ್ತದೆ. ಖಾಸಗಿ ಬಸ್‌ಗಳ ಕಾರ್ಯಾಚರಣೆ ನಡೆಯಲಿದೆ ಎಂದರು.

### ಒಂದು ತಿಂಗಳ ತೆರಿಗೆ ವಿನಾಯ್ತಿ

ಬೆಂಗಳೂರು: ಸಾರಿಗೆ ಸಂಸ್ಥೆಗಳ ನೌಕರರು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಂಡಿರುವುದರಿಂದ ರಾಜ್ಯ ಸರ್ಕಾರ ಸಾರ್ವಜನಿಕರ ಅನುಕೂಲಕ್ಕಾಗಿ ಖಾಸಗಿ ವಾಹನಗಳ ಬಳಕೆಗೆ ಮುಂದಾಗಿದ್ದು, ಸರ್ಕಾರ ಬಳಸಿಕೊಳ್ಳುವ ಖಾಸಗಿ ವಾಹನಗಳಿಗೆ [illegible] ತಿಂಗಳ ತೆರಿಗೆ ವಿನಾಯ್ತಿ ನೀಡಿ ಆದೇಶ ನೀಡಿದೆ.

ರಸ್ತೆ ಸಾರಿಗೆ ಸಂಸ್ಥೆಗಳ ನೌಕರರು ಏಪ್ರಿಲ್ 7 ರಿಂದ ಅನಿರ್ದಿಷ್ಟಾವಧಿ ಮುಷ್ಕರ ಮಾಡುವುದರಿಂದ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಮತ್ತು ದಿನ ನಿತ್ಯ ಪ್ರಯಾಣಿಸುವ ಪ್ರಯಾಣಿಕರಿಗೆ ಸುಗಮ ಸಾರಿಗೆ ವ್ಯವಸ್ಥೆಯನ್ನು ಖಾಸಗಿ ಪ್ರಯಾಣಿಕರ ವಾಹನಗಳ ಮೂಲಕ ಪರ್ಯಾಯವಾಗಿ ಕಲ್ಪಿಸಲು, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ 1957 ಕಲಂ 16(1) ಅನ್ವಯ ಅಧಿಕಾರವನ್ನು ಚಲಾಯಿಸಿ ಮಾರ್ಚ್ 29 ರಂದು ಪರವಾನಗಿಯನ್ನು ರಾಜ್ಯ ಸರ್ಕಾರಕ್ಕೆ ಒಪ್ಪಿಸಿರುವ ಖಾಸಗಿ ನೋಂದಾಯಿತ ಪ್ರಯಾಣಿಕರ ವಾಹನಗಳಿಗೆ ಏಪ್ರಿಲ್ ಒಂದು ತಿಂಗಳು ಅನ್ವಯಿಸುವಂತೆ ಮೋಟಾರು ವಾಹನ ತೆರಿಗೆ ಪಾವತಿಯಿಂದ ವಿನಾಯಿತಿ ನೀಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

### ಸಿಬ್ಬಂದಿ ಪ್ರತಿಭಟನೆ ಸರಿಯಲ್ಲ

**ಚಿಕ್ಕಮಗಳೂರು:** ಕೋವಿಡ್ ಕಾರಣದಿಂದ ಸಾರಿಗೆ ಸಂಸ್ಥೆ 3,200 ಕೋಟಿ ರೂ. ನಷ್ಟದಲ್ಲಿದ್ದು ಸಾರ್ವಜನಿಕರಿಗೆ ತೊಂದರೆಯಾಗದ ರೀತಿಯಲ್ಲಿ ಸಾರಿಗೆ ಸೇವೆ



ನೀಡಲಾಗುತ್ತಿದೆ. ಸಂಕಷ್ಟದ ಸಮಯದಲ್ಲಿ ಸಿಬ್ಬಂದಿ ಪ್ರತಿಭಟನೆಗೆ ಮುಂದಾಗಿರುವ ಕ್ರಮ ಸರಿಯಲ್ಲ, ಕೆಲವರು ದಾರಿ ತಪ್ಪಿಸುವ ಕೆಲಸ ಮಾಡುತ್ತಾ ಗೊಂದಲ ಮೂಡಿಸುತ್ತಿದ್ದಾರೆ ಎಂದು ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಹಾಗೂ ಹೊಳಲ್ಕೆರೆ ಶಾಸಕ ಚಂದ್ರಪ್ಪ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, 2020ರ ಮಾರ್ಚ್ ತಿಂಗಳಿಂದ ಇದುವರೆಗೂ ರಾಜ್ಯ ಸಾರಿಗೆ ಸಂಸ್ಥೆ 3,200 ಕೋಟಿ ರೂ. ನಷ್ಟ ಅನುಭವಿಸುತ್ತಿದೆ. ರಾಜ್ಯದಲ್ಲಿ 30 ಸಾವಿರ ಬಸ್‌ಗಳನ್ನು ಸಂಸ್ಥೆ ಹೊಂದಿದ್ದು ಸದ್ಯ 22 ಸಾವಿರ ಬಸ್ ಸಂಚರಿಸುತ್ತಿವೆ. ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ನೌಕರರ ಹಿತ ಕಾಯಲು ಬದ್ಧವಾಗಿದೆ. ಮುಷ್ಕರಕ್ಕೆ ಕರೆ ನೀಡಿರುವ ಸಂಘಟನೆಗಳು ಪರಿಸ್ಥಿತಿಯನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

### ಮೇ 4ರ ಬಳಿಕ ಪರಿಷ್ಕರಣೆ

ಕಲಬುರಗಿ: ಸಾರಿಗೆ ನೌಕರರ ಎಂಟು ಬೇಡಿಕೆ ಈಡೇರಿಸಿದ್ದೇವೆ. ಇನ್ನೂ ಒಂದು ಬಾಕಿ ಇರುವ ವೇತನ ಹೆಚ್ಚಳವನ್ನು ಮೇ 4ರ ನಂತರ ಪರಿಷ್ಕರಿಸುವ ಕುರಿತು ನೌಕರರಿಗೆ ಮನವರಿಕೆ ಮಾಡಲಾಗಿದೆ. ಆದರೂ ಬಸ್ ಸಂಚಾರ ಬಂದ್ ಮಾಡಿದರೆ ಅನಿವಾರ್ಯವಾಗಿ ಖಾಸಗಿ ವಾಹನಗಳನ್ನು ತಂದು ಓಡಿಸಲಾ



ಗುವುದು ಎಂದು ಸಾರಿಗೆ ಸಚಿವ ಲಕ್ಷ್ಮಣ ಸವದಿ ಹೇಳಿದರು.

ಬಸವಕಲ್ಯಾಣ ಚುನಾವಣೆ ಪ್ರಚಾರಕ್ಕೆ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿ, ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಬೇಡಿಕೆ ಈಡೇರಿಸಲು ಆಗುತ್ತಿಲ್ಲ. ಹೀಗಾಗಿ ಚುನಾವಣೆ ಫಲಿತಾಂಶ ನಂತರ ಬೇಡಿಕೆ ಈಡೇರಿಸುವುದಾಗಿ ಭರವಸೆ ನೀಡಲಾಗಿದೆ. ಹೀಗಾಗಿ ಮೇ 4ರ ವರೆಗೆ ಕಾಯುವಂತೆ ಕಾಲಾವಕಾಶ ನೀಡಿ. ವೇತನ ಪರಿಷ್ಕರಣೆಗೆ ಅನುಮತಿ ಕೋರಿ ಚುನಾವಣೆ ಆಯೋಗಕ್ಕೆ ಪತ್ರ ಬರೆದು ಮನವಿ ಮಾಡಿದ್ದೇವೆ. ಅಲ್ಲಿಂದ ಅನುಮತಿ ಸಿಕ್ಕರೆ ಮುಂದಿನ ಹೆಜ್ಜೆ ಇಡಲಾಗುವುದು. ಬಸ್ ಸಂಚಾರ ಬಂದ್ ಮಾಡಿದರೆ ಕೊರೊನಾ ಸಂದರ್ಭದಲ್ಲಿ ಬಡವರಿಗೆ, ಮಧ್ಯಮ ವರ್ಗದವರಿಗೆ, ವಿದ್ಯಾರ್ಥಿಗಳಿಗೆ ಸಾಕಷ್ಟು ತೊಂದರೆ ಆಗುತ್ತದೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಕೋಡಿಹಳ್ಳಿ ಚಂದ್ರಶೇಖರ ಮೇಧಾವಿ, ಬಹಳ ಬುದ್ಧಿವಂತರು. ಅವರಷ್ಟು ಬುದ್ಧಿ ನಮ್ಮ ಸರ್ಕಾರಕ್ಕೆ ಇಲ್ಲ. ಅನವಶ್ಯಕವಾಗಿ ಸರ್ಕಾರ ಮತ್ತು ನೌಕರರ ಮಧ್ಯೆ ಗೊಂದಲ ಸೃಷ್ಟಿಸುವುದಕ್ಕೆ ಮುಂದಾಗಿದ್ದಾರೆ. ಬಿಎಂಟಿಸಿ ಸೇರಿ ಯಾವುದೇ ನಿಗಮಗಳನ್ನು ಖಾಸಗೀಕರಣ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ. ಕೆಲವರು ಬಿಎಂಟಿಸಿ ಖಾಸಗೀಕರಣ ಮಾಡಲಾಗುತ್ತದೆ ಎನ್ನುವ ವದಂತಿ ಹರಡಿಸುತ್ತಿದ್ದಾರೆ, ಕಿವಿಗೊಡಬೇಡಿ ಎಂದರು.

### ಖಾಸಗಿ ಬಸ್ ರೆಡಿ

**1ನೇ ಪುಟದಿಂದ** ▶ 6ನೇ ವೇತನ ಆಯೋಗ ಶಿಫಾರಸು ಜಾರಿಯಾಗುವವರೆಗೂ ಹಿಂದೆಸರಿಯುವ ಪ್ರಶ್ನೆಯೇ ಇಲ್ಲ, ಮುಷ್ಕರದಲ್ಲಿ ಯಾವುದೇ ಬದಲಾವಣೆ ಇಲ್ಲ' ಎಂದು ಹೇಳಿದೆ.

**ಎಸ್ಮಾ ಜಾರಿ?:** ಸಾರಿಗೆ ನೌಕರರು ಮುಷ್ಕರ ನಡೆಸಿದರೆ, ಅವರ ವಿರುದ್ಧ ಎಸ್ಮಾದಂಥ ಕಠಿಣ ಕ್ರಮ ತೆಗೆದುಕೊಳ್ಳಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸಿಎಂ ಬಿ.ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಸಾರಿಗೆ ಇಲಾಖೆಯ ನಾಲ್ಕೂ ನಿಗಮಗಳ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ. ಸಾರಿಗೆ ನೌಕರರ ಜತೆ ಸಂಧಾನ ಮಾಡಬೇಡಿ ಎಂದೂ ಸಿಎಂ ಖಡಕ್ಕಾಗಿಯೇ ಸೂಚನೆ ನೀಡಿದ್ದು, ಪರ್ಯಾಯ ವ್ಯವಸ್ಥೆ ಮಾಡುವಂತೆಯೂ ನಿರ್ದೇಶನ ನೀಡಿದ್ದಾರೆ.

**ಆರ್‌ಟಿಒ, ಪೊಲೀಸ್ ನೆರವಿನಲ್ಲಿ ಖಾಸಗಿ ಸೇವೆ:** ಖಾಸಗಿ ಬಸ್, ಟ್ಯಾಕ್ಸಿ, ಮ್ಯಾಕ್ಸಿಕ್ಯಾಬ್‌ಗಳಿಗೆ ತಾತ್ಕಾಲಿಕ ಪರ್ಮಿಟ್ ಕೊಟ್ಟು ರಸ್ತೆಗಿಳಿಸಲು ಸರ್ಕಾರ ನಿರ್ಧರಿಸಿದ್ದು, ಈಗಾಗಲೇ ಎಲ್ಲ ಪ್ರಾದೇಶಿಕ ಸಾರಿಗೆ ಅಧಿಕಾರಿಗಳೊಂದಿಗೆ ಆಯಾ ಜಿಲ್ಲಾಧಿಕಾರಿಗಳು ಮಾತುಕತೆ ನಡೆಸಿ, ಒತ್ತಡಕ್ಕೆ ಅನುಗುಣವಾಗಿ ಪರ್ಮಿಟ್‌ಗಳನ್ನು ವಿತರಿಸಲು ಸೂಚಿಸಲಾಗಿದೆ. ಅಲ್ಲದೆ, ನಿಗಮಗಳ ಬಸ್ ನಿಲ್ದಾಣಗಳಿಂದಲೇ ವಾಹನಗಳ ಕಾರ್ಯಾಚರಣೆಗೆ ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಪೊಲೀಸ್ ನೆರವು ಪಡೆಯಲು ನಿರ್ಧರಿಸಲಾಗಿದೆ.

**ನೌಕರರ ಬೇಡಿಕೆಯಂತೆ ಆರನೇ ವೇತನ ಆಯೋಗ ಜಾರಿ ಸಾಧ್ಯವಿಲ್ಲ, ಸಾರಿಗೆ ನೌಕರರೊಂದಿಗೆ ಮತ್ತೆ ಮಾತುಕತೆಯ ಪ್ರಶ್ನೆಯೂ ಇಲ್ಲ, ಮುಷ್ಕರಕ್ಕೆ ಮುಂದಾದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ, ಎಸ್ಮಾ ಸೇರಿದಂತೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ.**

• **ಪಿ. ರವಿಕುಮಾರ್**, ಮುಖ್ಯ ಕಾರ್ಯದರ್ಶಿ